## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : | 689 |
| ಸದಸ್ಯರ ಹೆಸರು : | ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ: | 23-07-2019 |
| ಉತ್ತರಿಸುವ ಸಚಿವರು: | ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಹುಕ್ಕೇರಿ ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ಡಯಾಲಿಸಿಸ್ ಘಟಕವನ್ನು ಯಾವಾಗ ಆರಂಭಿಸಲಾಗಿದೆ; | ಹುಕ್ಕೇರಿ ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ಡಯಾಲಿಸಿಸ್ ಘಟಕವನ್ನು ದಿನಾಂಕ:07-12-2018 ರಂದು ಆರಂಭಿಸಲಾಗಿದೆ. |
| ಆ) | ಈ ಡಯಾಲಿಸಿಸ್ ಘಟಕದ ನಿರ್ವಹಣೆಯನ್ನು ಯಾರಿಗೆ ವಹಿಸಲಾಗಿದೆ. | ಈ ಡಯಾಲಿಸಿಸ್ ಘಟಕದ ನಿರ್ವಹಣೆಯನ್ನು ಮೆ॥ ಬಿ.ಆರ್.ಎಸ್ ಹೆಲ್ತ್ ಮತ್ತು ರಿಸರ್ಚ್ ಇನ್‌ಸ್ಟಿಟ್ಯೂಟ್, ಬೆಂಗಳೂರು- ಏಜೆನ್ಸಿಗೆ ವಹಿಸಲಾಗಿದೆ. |
| ಇ) | ವಿದ್ಯುತ್ ಹಾಗೂ ನೀರಿನ ಸರಬರಾಜಿನ ಕೊರತೆಯಿಂದ ಈ ಯಂತ್ರವು ಸ್ಥಗಿತ ಗೊಂಡಿದ್ದು, ಇದರಿಂದ ಸಾರ್ವಜನಿಕರು ತೊಂದರೆಗೊಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br>ಸದರಿ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸ ಬೇಕಾಗಿದ್ದ ಸಂದರ್ಭದಲ್ಲಿ ಸಿವಿಲ್ ಕಾಮಗಾರಿಗಳು 2018-19ರಲ್ಲಿ ಚಾಲ್ತಿಯಲ್ಲಿದ್ದು, ತಾತ್ಕಾಲಿಕವಾಗಿ ವಿದ್ಯುತ್ ಪೂರೈಕೆ ಅಡಚಣೆ ಉಂಟಾಗಿರುತ್ತದೆ.<br>ದಿನಾಂಕ: 17-07-2019 ರಂದು ಸಂಭವಿಸಿದ ಮಳೆ ಹಾಗೂ ಬಿರುಗಾಳಿಯಿಂದ ವಿದ್ಯುತ್ ಪೂರೈಕೆಗೆ ಅಡಚಣೆ ಉಂಟಾಗಿದ್ದು, ತ್ವರಿತವಾಗಿ ವಿದ್ಯುತ್ ಪೂರೈಕೆಯನ್ನು ಒದಗಿಸಲು ಕ್ರಮವಹಿಸಲಾಗುತ್ತಿದೆ. |
| ಈ) | ನಿರಂತರ ನೀರು ಹಾಗೂ ವಿದ್ಯುತ್ತಿನ ಸರಬರಾಜು ಮಾಡುವ ನಿಟ್ಟಿನಲ್ಲಿ ಹಾಗೂ ನಿರ್ವಾಹಕರ ನಿಷ್ಕಾಳಜಿಯ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? | ನೀರಿನ ಅಭಾವ ವಿದ್ದಲ್ಲಿ, ನಿರಂತರ ನೀರು ಸರಬರಾಜು ಮಾಡಲು ಆಸ್ಪತ್ರೆಯ ಆರೋಗ್ಯ ರಕ್ಷಾ ಸಮಿತಿಯ ಅನುದಾನ ಬಳಕೆಗೆ ಆದೇಶ ಹೊರಡಿಸಲಾಗಿದೆ.<br>ನಿರಂತರ ವಿದ್ಯುತ್ ಲಭ್ಯತೆಗಾಗಿ 30 ಕೆ.ವಿ.ಎ ಜನರೇಟರ್ ಒದಗಿಸಲು ಸರಬರಾಜು ಆದೇಶ ನೀಡಲಾಗಿದೆ.<br>ಸರ್ಕಾರದ ವತಿಯಿಂದ ಡಯಾಲಿಸಿಸ್ ಕೇಂದ್ರವನ್ನು ಸ್ಥಾಪಿಸಲು ಅವಶ್ಯವಿರುವ ಸ್ಥಳ, ವಿದ್ಯುತ್ ಹಾಗೂ ನೀರಿನ ಪೂರೈಕೆಯನ್ನು ಒದಗಿಸಲಾಗಿದೆ. |

**ಕಡತ ಸಂಖ್ಯೆ: ಆಕುಕ 39 ಎಫ್‌ಪಿಇ 2019**

(ಶಿವಾನಂದ ಎಸ್. ಪಾಟೀಲ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು